ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 11/2/2020

# ವಿಧಾನಪರಿಷತ್‌ನ ಒಂದು ಸ್ಥಾನಕ್ಕೆ 17ಕ್ಕೆ ಚುನಾವಣೆ

ಬೆಂಗಳೂರು: ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್‌ನ ಒಂದು ಸ್ಥಾನಕ್ಕೆ ಫೆ.17 ರಂದು ಚುನಾವಣೆ ನಡೆಯುವುದು ಖಚಿತವಾಗಿದೆ. ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದ ಸೋಮವಾರ ಯಾರೊಬ್ಬರೂ ನಾಮಪತ್ರ ವಾಪಸ್ ಪಡೆಯದ ಕಾರಣ ಚುನಾವಣೆ ನಡೆಯಲಿದೆ. ಬಿಜೆಪಿಯಿಂದ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ಕಾಂಗ್ರೆಸ್-ಜೆಡಿಎಸ್ ಬೆಂಬಲಿತ ಎಂದು ಹೇಳಿಕೊಂಡಿರುವ ಪಕ್ಷೇತರ ಅಭ್ಯರ್ಥಿ ಅನಿಲ್‌ಕುಮಾರ್ ಕಣದಲ್ಲಿದ್ದಾರೆ. ರಾಜ್ಯ ವಿಧಾನಸಭೆಯ ಸಂಖ್ಯಾಬಲ 222 ಇದ್ದು ಗೆಲುವಿಗೆ 112 ಮತಗಳು ಅಗತ್ಯವಾಗಿವೆ. ಬಿಜೆಪಿ 117 ಸಂಖ್ಯಾಬಲ ಹೊಂದಿದ್ದು ಕಾಂಗ್ರೆಸ್-ಜೆಡಿಎಸ್ 105 ಸಂಖ್ಯಾಬಲ ಹೊಂದಿದೆ. ಬಿಜೆಪಿಯ ಲಕ್ಷ್ಮಣ ಸವದಿ ಅವಿರೋಧ ಆಯ್ಕೆಯಾಗುವ ವಿಶ್ವಾಸದಲ್ಲಿದ್ದರು. ಆದರೆ, ಅನಿಲ್ ಕುಮಾರ್ ದಿಢೀರ್ ನಾಮಪತ್ರ ಸಲ್ಲಿಸಿದ್ದರಿಂದ ಇದೀಗ ಚುನಾವಣೆ ನಡೆಯುವಂತಾಗಿದೆ.